

## ಹೊಸ ಉಪ ರಾಷ್ಟ್ರಪತಿ

ಉಪ ರಾಷ್ಟ್ರಪತಿಯಾಗಿದ್ದ ಜಗದೀಪ್ ಧನಕರ್ ಅವರ ದಿಢೀರ್ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ಸೆ.7ರಂದು ನಡೆದ ಚುನಾವಣೆಯಲ್ಲಿ ಎನ್‌ಡಿಎ ಅಭ್ಯರ್ಥಿ ಸಿ.ಪಿ.ರಾಧಾಕೃಷ್ಣನ್ ಅವರು ಗೆಲುವು ಸಾಧಿಸಿ, ದೇಶದ 15ನೇ ಉಪ ರಾಷ್ಟ್ರಪತಿಯಾಗಿ ಆಯ್ಕೆಯಾದರು.



## ಮಾಲೇಂಗಾವ್ ಸ್ಫೋಟ: ಆರೋಪಿಗಳ ಖುಲಾಸೆ

2008ರ ಸೆಪ್ಟೆಂಬರ್ 8ರಂದು ಮಹಾರಾಷ್ಟ್ರದ ಮಾಲೇಗಾಂವ್‌ನಲ್ಲಿ ನಡೆದಿದ್ದ ಸ್ಫೋಟ ಪ್ರಕರಣದ ಎಲ್ಲ ಏಳು ಆರೋಪಿಗಳನ್ನು ಖುಲಾಸೆಗೊಳಿಸಿ ಎನ್‌ಐಎ ನ್ಯಾಯಾಲಯ ಜುಲೈ 31ರಂದು ತೀರ್ಪು ನೀಡಿತ್ತು. ಆರೋಪಿಗಳ ವಿರುದ್ಧ ಸಾಕ್ಷ್ಯಗಳ ಕೊರತೆ ಇರುವುದನ್ನು ನ್ಯಾಯಾಲಯ ತನ್ನ ತೀರ್ಪಿನಲ್ಲಿ ಉಲ್ಲೇಖಿಸಿತ್ತು.



ಗೋವಾದ ನೈಟ್‌ಕ್ಲಬ್ ಬೆಂಕಿ ಅವಘಡ

## ಅಪಘಾತಗಳು, ವಿಪತ್ತುಗಳು

ಈ ವರ್ಷ ಸಂಭವಿಸಿದ ಹಲವು ಅಪಘಾತಗಳು, ನೈಸರ್ಗಿಕ ವಿಪತ್ತುಗಳು ನೂರಾರು ಜನರನ್ನು ಬಲಿ ಪಡೆದಿವೆ.

- **ಡಿಸೆಂಬರ್ 6:** ಗೋವಾದ ನೈಟ್‌ಕ್ಲಬ್‌ನಲ್ಲಿ ಬೆಂಕಿ ಆಕಸ್ಮಿಕ ಸಂಭವಿಸಿ 25 ಜನರು ಮೃತರಾಗಿದ್ದರು.
- **ನವೆಂಬರ್ 5:** ಛತ್ತೀಸಗಢದ ಬಿಲಾಸಪುರದಲ್ಲಿ ಪ್ರಯಾಣಿಕರ ರೈಲು, ಗೂಡ್ಸ್ ರೈಲಿಗೆ ಡಿಕ್ಕಿ ಹೊಡೆದು 11 ಜನರು ಅಸುನೀಗಿದ್ದರು.
- **ಅಕ್ಟೋಬರ್ 14:** ರಾಜಸ್ಥಾನದ ಜೈಸಲ್ಮೇರ್‌ನಿಂದ ಜೋಧಪುರಕ್ಕೆ ಹೊರಟಿದ್ದ ಹವಾನಿಯಂತ್ರಿತ ಖಾಸಗಿ ಸ್ಲೀಪರ್ ಬಸ್‌ಗೆ ಮಾರ್ಗಮಧ್ಯೆ ಬೆಂಕಿ ಹತ್ತಿಕೊಂಡು, ಅದರಲ್ಲಿದ್ದ 57 ಮಂದಿ ಪೈಕಿ 20ಕ್ಕೂ ಹೆಚ್ಚು ಮಂದಿ ಸುಟ್ಟು ಕರಕಲಾಗಿದ್ದರು.
- **ಅಕ್ಟೋಬರ್ 24:** ಮುಂಜಾನೆ ಹೈದರಾಬಾದ್‌ನಿಂದ ಬೆಂಗಳೂರಿಗೆ ಹೊರಟಿದ್ದ ಖಾಸಗಿ ಎಸಿ ಸ್ಲೀಪರ್ ಬಸ್ ಆಂಧ್ರಪ್ರದೇಶದ ಕರ್ನೂಲಿನಲ್ಲಿ ಬೈಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಬೆಂಕಿ ಹತ್ತಿಕೊಂಡು 20 ಪ್ರಯಾಣಿಕರು ಸಜೀವವಾಗಿ ದಹಿಸಿದ್ದರು.
- **ಸೆಪ್ಟೆಂಬರ್ 12:** ಹಾಸನ ಜಿಲ್ಲೆಯ ಮೊಸಳೆ ಹೊಸಹಳ್ಳಿಯಲ್ಲಿ ಗಣೇಶ ವಿಗ್ರಹ ವಿಸರ್ಜನೆಯ ಮೆರವಣಿಗೆಯಲ್ಲಿ ಭಾಗವಹಿಸಿದ್ದವರ ಮೇಲೆ ಟ್ರಕ್ ಡಿಕ್ಕಿ ಹೊಡೆದು 10 ಜನರು ಅಸುನೀಗಿದ್ದರು.
- **ಆಗಸ್ಟ್ 14:** ಜಮ್ಮು ಮತ್ತು ಕಾಶ್ಮೀರದ ಕಿಶ್ತ್ವಾರ್‌ನಲ್ಲಿ ಮೇಘ ಸ್ಫೋಟ ಮತ್ತು ಹಠಾತ್ ಪ್ರವಾಹದಿಂದಾಗಿ 68 ಜನರು ಮೃತಪಟ್ಟಿದ್ದರು.
- **ಜುಲೈ 9:** ಗುಜರಾತ್‌ನ ವಡೋದರಾದಲ್ಲಿ ಸೇತುವೆ ಕುಸಿದು 22 ಜನರು ಪ್ರಾಣ ಕಳೆದುಕೊಂಡಿದ್ದರು.
- **ಜೂನ್ 30:** ತೆಲಂಗಾಣದ ಸಂಗಾರೆಡ್ಡಿ ಜಿಲ್ಲೆಯಲ್ಲಿ ರಾಸಾಯನಿಕ ಕಾರ್ಖಾನೆಯೊಂದರಲ್ಲಿ ಸ್ಫೋಟ ಸಂಭವಿಸಿ 46 ಜನರು ಮರಣ ಹೊಂದಿದ್ದರು.
- **ಮೇ 18:** ಹೈದರಾಬಾದ್‌ನ ಕಟ್ಟಡವೊಂದರಲ್ಲಿ ಬೆಂಕಿ ಆಕಸ್ಮಿಕದಲ್ಲಿ 17 ಮಂದಿ ಸಾವಿಗೀಡಾಗಿದ್ದರು.
- **ಏಪ್ರಿಲ್ 1:** ಗುಜರಾತ್‌ನ ದೀಸಾ ಬಳಿಯ ಪಟಾಕಿ ತಯಾರಿಕಾ ಕಾರ್ಖಾನೆಯಲ್ಲಿ ಸ್ಫೋಟ ಸಂಭವಿಸಿ 21 ಜನರು ಉಸಿರು ತೆತ್ತಿದ್ದರು.

## ದೆಹಲಿಯಲ್ಲಿ ಬಿಜೆಪಿ, ಬಿಹಾರದಲ್ಲಿ ಎನ್‌ಡಿಎ

ಈ ವರ್ಷದ ಫೆಬ್ರುವರಿಯಲ್ಲಿ ದೆಹಲಿ ವಿಧಾನಸಭೆಗೆ ನಡೆದ ಚುನಾವಣೆಯಲ್ಲಿ ಬಿಜೆಪಿಯು ಎಎಪಿಯನ್ನು ಸೋಲಿಸಿ ರಾಷ್ಟ್ರ ರಾಜಧಾನಿಯ ಅಧಿಕಾರದ ಗದ್ದುಗೆಯನ್ನು ಹಿಡಿಯಿತು. 70 ಸ್ಥಾನಗಳ ಪೈಕಿ 48 ಸ್ಥಾನಗಳನ್ನು ಗೆಲ್ಲುವುದರ ಮೂಲಕ 17 ವರ್ಷಗಳ ನಂತರ ಅಧಿಕಾರಕ್ಕೆ ಏರಿತು. ಶಾಲಿಮಾರ್ ಭಾಗ್ ಶಾಸಕಿ ರೇಖಾ ಗುಪ್ತಾ ಅವರು ಮುಖ್ಯಮಂತ್ರಿಯಾಗಿ ಆಯ್ಕೆಯಾದರು

ಬಿಹಾರ ವಿಧಾನಸಭೆಗೆ ನವೆಂಬರ್‌ನಲ್ಲಿ ನಡೆದ ಚುನಾವಣೆಯಲ್ಲಿ ಬಿಜೆಪಿ, ಜೆಡಿಯು ಒಳಗೊಂಡ ಎನ್‌ಡಿಎ ಮೈತ್ರಿಕೂಟವು ಭರ್ಜರಿ ಗೆಲುವು ಸಾಧಿಸಿತು. ನಿತೀಶ್ ಕುಮಾರ್ ಮತ್ತೆ ಮುಖ್ಯಮಂತ್ರಿಯಾದರು. 243 ಕ್ಷೇತ್ರಗಳ ಪೈಕಿ 202 ಕ್ಷೇತ್ರಗಳಲ್ಲಿ ಎನ್‌ಡಿಎ ಅಭ್ಯರ್ಥಿಗಳು ಜಯಭೇರಿ ಬಾರಿಸಿದರು.



ರೇಖಾ ಗುಪ್ತಾ



ನಿತೀಶ್ ಕುಮಾರ್